# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಬುಧವಾರ, ದಿನಾಂಕ:12ನೇ ಜುಲೈ, 2023

## (ಸಮಯ: ಬೆಳಗ್ಗೆ: 11.00 ಗಂಟೆಗೆ)

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

## 02. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ

"2023ನೇ ಜುಲೈ, 03ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:05.07.2023ರಂದು **ಶ್ರೀ ಯು.ಬಿ. ವೆಂಕಟೇಶ್** ರವರು ಸೂಚಿಸಿ **ಶ್ರೀ ಎಂ. ನಾಗರಾಜು** ಅವರು ಅನುಮೋದಿಸಿರುವ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ ಮತ್ತು ಸರ್ಕಾರದಿಂದ ಉತ್ತರ.

## 03. ಗಮನ ಸೆಳೆಯುವ ಸೂಚನೆಗಳು

01 **ಡಾ: ವೈ.ಎ. ನಾರಾಯಣಸ್ವಾಮಿ** ಅವರು ರಾಜ್ಯದ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಬೋಧಕರ ಹುದ್ದೆಗಳನ್ನು ಕಾಲಕಾಲಕ್ಕೆ ಭರ್ತಿ ಮಾಡದಿರುವುದರಿಂದ ಗುಣಾತ್ಮಕ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವರ ಗಮನ ಸೆಳೆಯುವುದು.

02 **ಶ್ರೀ ಯು.ಬಿ. ವೆಂಕಟೇಶ್** ಅವರು ಬೆಂಗಳೂರು ನಗರದ ಕತ್ರಿಗುಪ್ಪೆ ಗ್ರಾಮದ ಸರ್ವೆ ನಂ.15/1ರಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ಕಾಯ್ದಿರಿಸಲಾದ ನಿವೇಶನವನ್ನು ಕೆಲವು ಭೂಗಳ್ಳರು ನಕಲಿ ದಾಖಲೆಗಳನ್ನು ಸೃಷ್ಟಿಸಿಕೊಂಡು ಅತಿಕ್ರಮಿಸಿಕೊಂಡಿರುವ ಕುರಿತು ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦3 **ಶ್ರೀ ಗೋವಿಂದರಾಜು** ಅವರು ರಾಜ್ಯ ಸರ್ಕಾರಕ್ಕೆ ಮೂರು ವರ್ಷಗಳ ಹಿಂದೆ ಕೋಟ್ಯಾಂತರ ರೂ. ಆದಾಯ ತಂದುಕೊಡುತ್ತಿದ್ದ ಎಪಿಎಂಸಿಗಳು ಪ್ರಸ್ತುತ ವಿದ್ಯುತ್ ಮತ್ತು ನೀರಿನ ಶುಲ್ಕಗಳನ್ನು ಪಾವತಿಸಲಾಗದೆ ಮುಚ್ಚುವ ಸ್ಥಿತಿ ತಲುಪಿರುವ ಕುರಿತು ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

೦1. **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯತ್‌ಗಳಲ್ಲಿ ದೈನಂದಿನ ಆಡಳಿತಾತ್ಮಕ ಸಮಸ್ಯೆಗಳು, ಪಂಚತಂತ್ರ ತಂತ್ರಾಂಶ ವ್ಯವಸ್ಥೆಯಲ್ಲಿರುವ ಲೋಪ ದೋಷಗಳು, ಸರ್ವರ್ ಸಮಸ್ಯೆ, ಸಿಬ್ಬಂದಿಗಳ ವೇತನ, ಇನ್ನಿತರೆ ಸಮಸ್ಯೆ ಹಾಗೂ ಬೇಡಿಕೆಗಳ ಕುರಿತು ಪ್ರಸ್ತಾಪಿಸುವುದು.

೦2. **ಡಾ: ಡಿ. ತಿಮ್ಮಯ್ಯ,** ಅವರು ಮೈಸೂರು ನಗರದ ಕೆಂಚಲಗೂಡು ಬಡಾವಣೆಯಲ್ಲಿ ವಿವೇಚನಾ ಕೋಟಾದಲ್ಲಿ ಲಭ್ಯವಿರುವ ನಿವೇಶನಗಳನ್ನು ಹಂಚಿಕೆ ಮಾಡುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಬಿ.ಎಸ್.ಸಿ ನರ್ಸಿಂಗ್ ಕೋರ್ಸ್‌ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಸಿಇಟಿ ಪರೀಕ್ಷೆಯ ಮೂಲಕ ಸೀಟನ್ನು ಹಂಚಿಕೆ ಮಾಡುವ ಸಂಬಂಧ ದಿನಾಂಕ:18.04.2013ರಂದು ಸರ್ಕಾರವು ಹೊರಡಿಸಿದ ಪ್ರಕಟಣೆಯಿಂದ ವಿದ್ಯಾರ್ಥಿಗಳಿಗೆ ಪೂರ್ವ ಸಿದ್ದತೆ ಮಾಡಿಕೊಳ್ಳಲು ಸರಿಯಾದ ಕಾಲಾವಕಾಶ ಸಿಗದೇ ಇರುವುದರಿಂದ 2022-23ನೇ ಶೈಕ್ಷಣಿಕ ವರ್ಷದಲ್ಲಿ ಅನುಸರಿಸಿದ ನಿಯಮಾವಳಿಗಳನ್ನು ಪಾಲಿಸುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**